ಇ) ಸಧ್ಯ ಇಂತಹ ಇನ್ನೊಂದು ಏತ ನೀರಾವರಿ ಯೋಜನೆಯ ಪ್ರಸ್ತಾವನೆ ಇರುವುದಿಲ್ಲ.

ವೃದ್ಧಾಪ್ಯ, ವಿಧವಾ ಮತ್ತು ಅಂಗವಿಕಲರ ಮಾಸಾಶನ ಮಂಜೂರು ಮಾಡಿರುವುದು :

735 ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆ ಮದ್ದೂರು ವಿಧಾನಸಭಾ ಕ್ಷೇತ್ರದ ಆತಗೂರು ಹೋಬಳಿ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ವೃದ್ಧಾಪ್ಯ ವೇತನ ಮತ್ತು ವಿಧವಾ ವೇತನ ಹಾಗೂ ಅಂಗವಿಕಲರ ವೇತನವನ್ನು ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು (ಗ್ರಾಮವಾರು ವಿವರಗಳನ್ನು ನೀಡುವುದು);

ಆ) ಕೆಲವು ಅರ್ಹ ಫಲಾನುಭವಿಗಳಿಗೆ ವೃದ್ಧಾಪ್ಯ, ವಿಧವಾ ಹಾಗೂ ಅಂಗವಿಕಲ ವೇತನವನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದ, ಅರ್ಹ ಫಲಾನುಭವಿಗಳಿಗೆ ಈ ವೇತನಗಳು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಮದ್ದೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಇದುವರೆವಿಗೂ ವೃದ್ಧಾಪ್ಯ, ವಿಧವಾ ಹಾಗೂ ಅಂಗವಿಕಲ ಮಾಸಾಶನವನ್ನು ಪಡೆದಿರುವವರೆಷ್ಟು; (ಫಲಾನುಭವಿಗಳ ಹೆಸರು ಮತ್ತು ವಿಳಾಸವನ್ನು ಗ್ರಾಮವಾರು ನೀಡುವುದು);

ಶ್ರೀ ಜೆ ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಆತಗೂರು ಹೋಬಳಿ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವೃದ್ಧಾಪ್ಯ ವೇತನ, ವಿಧವಾ ವೇತನ ಮತ್ತು ಅಂಗವಿಕಲ ವೇತನದಡಿ ಮಂಜೂರಾಗಿರುವ ಫಲಾನುಭವಿಗಳ ಸಂಖ್ಯೆ :

ಯೋಜನೆ	ಫಲಾನುಭವಿಗಳ ಸಂಖ್ಯೆ
ವೃದ್ಧಾಪ್ಯ ವೇತನ	303
ವಿಧವಾ ವೇತನ	556
ಅಂಗವಿಕಲ ವೇತನ	255
ಒಟ್ಟು	**1114**

ಗ್ರಾಮವಾರು ವಿವರವನ್ನು ಅನುಬಂಧ–1 ರಲ್ಲಿ ಲಗತ್ತಿಸಿದೆ.

ಆ) ಫಲಾನುಭವಿಗಳು ಸದರಿ ಯೋಜನೆಗಳಡಿ ಮಾಸಾಶನ ಕೋರಿ ಅರ್ಜಿ ಸಲ್ಲಿಸಿದ ಪಕ್ಷದಲ್ಲಿ ಯೋಜನೆಗಳಡಿ ಮಾಸಾಶನ ನೀಡಲು ನಿಗದಿಪಡಿಸಿರುವ ಅರ್ಹತೆಗಳನ್ನು ಹೊಂದಿದ್ದಲ್ಲಿ ಮಾಸಾಶನವನ್ನು ಮಂಜೂರು ಮಾಡಲಾಗುವುದು.

ಇ) ಮದ್ದೂರು ವಿಧಾನಸಭಾ ಕ್ಷೇತ್ರದ ಫಲಾನುಭವಿಗಳ ವಿವರ :

ಯೋಜನೆ	2006	2007	2008	2009
ವೃದ್ಧಾಪ್ಯ	226	1329	1270	–
ಅಂಗವಿಕಲ	104	353	235	223
ವಿಧವಾ	275	708	939	650
ಒಟ್ಟು	**605**	**2390**	**2444**	**873**

ಫಲಾನುಭವಿಗಳ ಗ್ರಾಮವಾರು ವಿವರವನ್ನು ಅನುಬಂಧ–2 ರಲ್ಲಿ ಲಗತ್ತಿಸಿದೆ.

575 ಶ್ರೀ ಶ್ರೀನಿವಾಸ್. ಎಸ್.ಆರ್. : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕು ಹಾಗಲವಾಡಿ ಕೆರೆಗೆ ಹೇಮಾವತಿ ನಾಲೆಯಿಂದ ಕುಡಿಯುವ ನೀರನ್ನು ಪೂರೈಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಕೆರೆಗೆ ನೀರು ತುಂಬಿಸುವ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಕೆರೆಗೆ ನೀರು ತುಂಬಿಸುವ ಕಾಮಗಾರಿಯನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು;

ಈ) ಹಾಗಿದ್ದಲ್ಲಿ, ಈ ಕಾಮಗಾರಿಗೆ ನಿಗದಿಪಡಿಸಿರುವ ಅನುದಾನ ಮೊತ್ತ ಎಷ್ಟು?

ಉ) ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ ಮತ್ತು ಎಷ್ಟು ಪ್ರಮಾಣದಲ್ಲಿ ನೀರನ್ನು ತುಂಬಿಸಲಾಗಿದೆ (ವಿವರ ನೀಡುವುದು);